ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1048 |
| 2) | ಮಾನ್ಯ ಪರಿಷತ್ ಸದಸ್ಯರ ಹೆಸರು | ಶ್ರೀ ಬಸನಗೌಡ ಬಾದರ್ಲಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| 3) | ಉತ್ತರಿಸಬೇಕಾದ ದಿನಾಂಕ | 17.03.2025 |
| 4) | ಉತ್ತರಿಸುವವರು | ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಪ್ರಶ್ನೆ | ಉತ್ತರ |
|---|---|
| (ಅ) ಕೌಶಲ್ಯ ಅಭಿವೃದ್ಧಿ ತರಬೇತಿ ಕೇಂದ್ರಗಳಲ್ಲಿ ಪಿಯುಸಿ ಪಾಸಾದ ಯುವಕ / ಯುವತಿಯರಿಗೆ ವಿಶೇಷ ತರಬೇತಿಗಳನ್ನು ನೀಡಿ ಉದ್ಯೋಗ ಒದಗಿಸುವ ಯೋಜನೆ ಇದೆಯೇ; | **<u>ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ – ( ಕೆ.ಎಸ್.ಡಿ.ಸಿ.)</u>**<br><br>ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದಿಂದ ಪಿ.ಯು.ಸಿ ಪಾಸಾದ ಯುವಕ/ಯುವತಿಯರಿಗೆ ವಿಶೇಷ ತರಬೇತಿ ನೀಡುವ ಯಾವುದೇ ಪ್ರತ್ಯೇಕ ಯೋಜನೆ/ಕಾರ್ಯಕ್ರಮಗಳು ಅನುಷ್ಠಾನದಲ್ಲಿರುವುದಿಲ್ಲ. ಆದಾಗ್ಯೂ, ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆಯಡಿ ಕನಿಷ್ಠ ಅಕ್ಷರಸ್ಥರಿಂದ ಹಿಡಿದು ಉನ್ನತ ವ್ಯಾಸಂಗ ಕೈಗೊಂಡ ಅಭ್ಯರ್ಥಿಗಳನ್ನು ಸಹ ಒಳಗೊಂಡಂತೆ ಅಲ್ಪಾವಧಿ ಕೌಶಲ್ಯಾಧಾರಿತ ತರಬೇತಿ ನೀಡಲಾಗುತ್ತಿದೆ ಹಾಗೂ ಈ ಯೋಜನೆಯಡಿ ತರಬೇತಿ ಪಡೆದ ಅಭ್ಯರ್ಥಿಗಳ ಪೈಕಿ ಶೇ.70ರಷ್ಟು ಅಭ್ಯರ್ಥಿಗಳಿಗೆ ಉದ್ಯೋಗಾವಕಾಶ ಕಲ್ಪಿಸುವಂತೆ ತರಬೇತಿದಾರ ಸಂಸ್ಥೆಗಳಿಗೆ ಷರತ್ತನ್ನು ವಿಧಿಸಲಾಗಿರುತ್ತದೆ.<br><br>ಉಳಿದಂತೆ ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದಿಂದ ರಾಜ್ಯ ಮಟ್ಟದಲ್ಲಿ ಹಾಗೂ ಜಿಲ್ಲಾ ಮಟ್ಟದಲ್ಲಿ ಉದ್ಯೋಗ ಮೇಳಗಳ ಮುಖೇನ ಉದ್ಯೋಗಾವಕಾಶವನ್ನು ಒದಗಿಸಲು ಕ್ರಮವಹಿಸಲಾಗಿರುತ್ತದೆ.<br><br><u>ರಾಷ್ಟ್ರೀಯ ಜೀವನೋಪಾಯ ಅಭಿಯಾನ</u><br><br><u>ದೀನ್ ದಯಾಳ್ ಅಂತ್ಯೋದಯ ನಗರ ಜೀವನೋಪಾಯ ಅಭಿಯಾನ (DAY-NULM)</u><br><br>ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆಯ ಡೇ-ಎನ್‌ಯುಎಲ್‌ಎಂ ದೀನ್ ದಯಾಳ್ ಅಂತ್ಯೋದಯ ಜನ ಆಜೀವಿಕ (ಶಹರಿ) ಯೋಜನೆಯನ್ನು (ಡಿಜೆಎವೈ-ಎಸ್) ಪ್ರಾಯೋಗಿಕವಾಗಿ ಅನುಷ್ಠಾನಗೊಳಿಸಲು ಅನುಮೋದನೆಯನ್ನು ನೀಡಿರುತ್ತದೆ. ಅಭಿಯಾನದ ಸ್ವಯಂ ಉದ್ಯೋಗ ಕಾರ್ಯಕ್ರಮ ಉಪಘಟಕದಡಿ ನಗರದ ನಿರುದ್ಯೋಗ ಯುವಕ ಯುವತಿಯರಿಗೆ ಹಾಗೂ ಪಿಯುಸಿ ಪಾಸಾದ ಯುವಕ ಯುವತಿಯರನ್ನು ಒಳಗೊಂಡಂತೆ.<br><br>• **<u>ಸ್ವಯಂ ಉದ್ಯೋಗ ಕಾರ್ಯಕ್ರಮ:</u>** ಯುವಕ/ಯುವತಿಯರು ಸ್ವಯಂ ಉದ್ಯೋಗ ಕಾರ್ಯಕ್ರಮ ಪ್ರಾರಂಭಿಸಲು ಇಚ್ಛಿಸಿದಲ್ಲಿ, ಸದರಿ ಉಪಘಟಕದಡಿ ವೈಯಕ್ತಿಕ ಕಿರು ಉದ್ದಿಮೆ, ಗುಂಪು ಕಿರು ಉದ್ದಿಮೆ ಕ್ರಮವಾಗಿ ಬ್ಯಾಂಕಿನಿಂದ ರೂ.2.00 ಲಕ್ಷ ಮತ್ತು ರೂ.10.00 ಲಕ್ಷದವರೆಗೆ ಸಾಲ ಸೌಲಭ್ಯವನ್ನು ಕಲ್ಪಿಸಲಾಗುವುದು. ಸದರಿ ಸಾಲದ ಮೊತ್ತಕ್ಕೆ ಶೇ.7ಕ್ಕಿಂತ ಮೇಲ್ಪಟ್ಟ ಬಡ್ಡಿ ಸಹಾಯಧನವನ್ನು ಯೋಜನೆಯಿಂದ ಭರಿಸಿ ಪಾವತಿಸಲಾಗುವುದು. |

| | |
|---|---|
| | • ಬ್ಯಾಂಕಿನಿಂದ ಸಾಲ ಸೌಲಭ್ಯ ಪಡೆದ ನಂತರ ಫಲಾನುಭವಿಗಳಿಗೆ ಉದ್ಯಮಶೀಲತಾಭಿವೃದ್ಧಿ ತರಬೇತಿ ನೀಡಲಾಗುವುದು.<br><br>**ಸಂಜೀವಿನಿ- ಕೆ ಎಸ್ ಆರ್ ಎಲ್ ಪಿ ಎಸ್ ಸಂಸ್ಥೆ / ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ (DAY-NRLM)**<br><br>ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಸಂಜೀವಿನಿ-ಕೆ.ಎಸ್.ಆರ್.ಎಲ್.ಪಿ.ಎಸ್ ಸಂಸ್ಥೆಯ ಮೂಲಕ ಅನುಷ್ಠಾನಗೊಳಿಸಲಾಗುತ್ತಿರುವ ಕೌಶಲ್ಯಾಭಿವೃದ್ಧಿ ಕಾರ್ಯಕ್ರಮಗಳಾದ ದೀನ್ ದಯಾಳ್ ಉಪಾಧ್ಯಾಯ ಗ್ರಾಮೀಣ ಕೌಶಲ್ಯ ಯೋಜನೆ(DDU-GKY) ಮತ್ತು ಗ್ರಾಮೀಣ ಸ್ವ-ಉದ್ಯೋಗ ತರಬೇತಿ ಕೇಂದ್ರ ಯೋಜನೆ(RSETI)ಗಳನ್ನು ಲಭ್ಯವಿರುವ ತರಬೇತಿ ಕಾರ್ಯಕ್ರಮಗಳಡಿ ಪಿಯುಸಿ ಪಾಸಾದ ಯುವಕ/ಯುವತಿಯರಿಗೆ ತರಬೇತಿಗಳನ್ನು ನೀಡಿ ವೇತನಾಧಾರಿತ/ಸ್ವಯಂ ಉದ್ಯೋಗವನ್ನು ಒದಗಿಸಲಾಗುತ್ತಿದೆ. |
| (ಆ) ಸರ್ಕಾರವು ರಾಜ್ಯದ ಯುವಕ/ಯುವತಿಯರಿಗೆ ಕೈಗಾರಿಕಾ ಉದ್ಯಮಗಳಲ್ಲಿ ಉದ್ಯೋಗ ಪಡೆಯಲು ಅನುಕೂಲವಾಗುವಂತೆ, ಖಾಸಗಿ ಉದ್ಯಮಗಳೊಂದಿಗೆ ಒಪ್ಪಂದ ಮಾಡಿಕೊಳ್ಳುವ ಬಗ್ಗೆ ಸರ್ಕಾರದ ನಿಲುವೇನು? | **ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ – ( ಕೆ.ಎಸ್.ಡಿ.ಸಿ.)**<br><br>ಮುಖ್ಯಮಂತ್ರಿಗಳ ಕೌಶಲ್ಯ ಕರ್ನಾಟಕ ಯೋಜನೆಯಡಿ ಪ್ರಸಕ್ತ ಸಾಲಿನಲ್ಲಿ ILC ಹಾಗೂ Future Skills ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು, ಕೈಗಾರಿಕಾ ಸಂಸ್ಥೆಗಳನ್ನು ತರಬೇತಿ ಪಾಲುದಾರರನ್ನಾಗಿ ತರಬೇತಿಯೊಂದಿಗೆ ಉದ್ಯೋಗ ಒದಗಿಸುವ ಕ್ರಮವನ್ನು ವಹಿಸಲಾಗಿರುತ್ತದೆ. |

ಸಂಖ್ಯೆ: ಕೌಉಜೀಇ 13 ಉಜೀಪ್ರ 2025

(ಡಾ. ಶರಣಪ್ರಕಾಶ ಆರ್ ಪಾಟೀಲ್)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ
ಸಚಿವರು.